## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 803(975) |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಮಂಜುನಾಥ್ ಭಂಡಾರಿ |
| 3 | ಉತ್ತರಿಸಬೇಕಾದ ದಿನಾಂಕ | 15.12.2025 |
| 4 | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ. | ರಾಜ್ಯದಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಲು ಇರುವ ಮಾರ್ಗ ಸೂಚಿಗಳೇನು: ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ಯಾವ ಮಾನದಂಡಗಳನ್ನು ಅನುಸರಿಲಾಗುತ್ತದೆ: | ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಲು ನ್ಯಾಷನಲ್ ಮೆಡಿಕಲ್ ಕೌನ್ಸಿಲ್ (NMC)ನ ಮಾರ್ಗಸೂಚಿಗಳನ್ನು ಅನುಸರಿಸಲಾಗುತ್ತಿದೆ. ಅದರನ್ವಯ ಅಗತ್ಯ ನಿವೇಶನ, ಕಟ್ಟಡ, ಬೋಧನಾ ಆಸ್ಪತ್ರೆ, ಬೋಧಕ-ಬೋಧಕೇತರ ಸಿಬ್ಬಂದಿಗಳು ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹೊಂದಬೇಕಿರುತ್ತದೆ. |
| ಆ. | ಇಲ್ಲಿಯವರೆಗೆ ರಾಜ್ಯದಲ್ಲಿ ಎಲ್ಲೆಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಲಾಗಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಹೊಸದಾಗಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಈವರೆಗೆ ಆಗಿರುವ ಕ್ರಮಗಳೇನು: | ರಾಜ್ಯದಲ್ಲಿ ಪ್ರಸ್ತುತ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಬಳ್ಳಾರಿ, ಬೀದರ್, ರಾಯಚೂರು, ಬೆಳಗಾವಿ, ಶಿವಮೊಗ್ಗ, ಹಾಸನ, ಮಂಡ್ಯ, ಚಾಮರಾಜನಗರ, ಕೊಡಗು, ಕಲಬುರಗಿ, ಕೊಪ್ಪಳ, ಗದಗ, ಕಾರವಾರ, ಚಿಕ್ಕಬಳ್ಳಾಪುರ, ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಚಿತ್ರದುರ್ಗ, ಜಿಲ್ಲೆಗಳಲ್ಲಿ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br>ರಾಮನಗರ, ಕನಕಪುರ ಮತ್ತು ಬಾಗಲಕೋಟೆಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುದಾನದಿಂದ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ. |
| ಇ. | ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನಲ್ಲಿ ಅಥವಾ ಬೈಂದೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಬೇಕೆಂಬ ಬೇಡಿಕೆ ಹಲವು ದಿನಗಳಿಂದ ಕೇಳಿ ಬಂದಿದ್ದು, ಈ ಬಗ್ಗೆ ಸರ್ಕಾರ ಈವರೆಗೆ ಕೈಗೊಂಡ ಕ್ರಮಗಳೇನು: | ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸ ಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.<br>ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00ಕೋಟಿಗಳ ಅನಾವರ್ತಕ ವೆಚ್ಚ ಹಾಗೂ 60.00ಕೋಟಿಗಳ ಆವರ್ತಕ ವೆಚ್ಚ ಅವಶ್ಯಕತೆ |

| | | |
|---|---|---|
| ಈ. | ಪ್ರಾದೇಶಿಕ ಅಸಮತೋಲನ ನಿವಾರಿಸಿಲು ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನಲ್ಲಿ ಅಥವಾ ಬೈಂದೂರಿನಲ್ಲಿ ಯಾವಾಗ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು? | ಇರುತ್ತದೆ. ಅದರಂತೆ, ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು.<br>ಪ್ರಸ್ತುತದಲ್ಲಿ ರಾಜ್ಯ ಸರ್ಕಾರದ ವತಿಯಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಬಾಕಿ ಇರುವುದಿಲ್ಲ.<br>ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ. |

**ಸಂಖ್ಯೆ:**ಎಂಇಡಿ 598 ಎಂಎಂಸಿ 2025

**(ಡಾ|| ಶರಣಪ್ರಕಾಶ್ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು